# ಮಾಜಿ ರಾಷ್ಟ್ರಪತಿ, ಭಾರತ ರತ್ನ ಪ್ರಣಬ್ ಮುಖರ್ಜಿ ನಿಧನಕ್ಕೆ ಸಂತಾಪ

**ಚಿತ್ರದುರ್ಗ ಆ. 31 :** ಹಿರಿಯ ರಾಜಕೀಯ ಮುತ್ಸದ್ದಿ, ಮಾಜಿ ರಾಷ್ಟ್ರಪತಿ, ಭಾರತರತ್ನ ಪ್ರಣಬ್ ಮುಖರ್ಜಿ ಅವರ ನಿಧನದಿಂದ ರಾಷ್ಟ್ರಕ್ಕೆ ತುಂಬಲಾರದ ನಷ್ಟವುಂಟಾಗಿದೆ ಎಂದು ಡಾ. ಶಿವಮೂರ್ತಿ ಮುರುಘಾ ಶರಣರು ತೀವ್ರ ಸಂತಾಪ ವ್ಯಕ್ತಪಡಿಸಿದರು.

ಅವರ ಅಗಲಿಕೆಯಿಂದ ಉಂಟಾಗಿರುವ ನೋವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಬಸವಾದಿ ಪ್ರಮಥರು ಅವರ ಕುಟುಂಬ ವರ್ಗದವರಿಗೆ ನೀಡಲಿ ಎಂದಿದ್ದಾರೆ. ನಂತರ ಒಂದುನಿಮಿಷ ಮೌನ ಆಚರಿಸಿ ಮೃತರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಬೋವಿಗುರುಪೀಠದ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮಿಗಳು, ನಿಪ್ಪಾಣಿಯ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು, ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್, ಎಸ್‌ಜೆಎಂ ವಿದ್ಯಾಪೀಠದ ಕಾರ್ಯದರ್ಶಿ ಎ.ಜೆ.ಪರಮಶಿವಯ್ಯ, ಕಾರ್ಯನಿರ್ವಹಣಾಧಿಕಾರಿ ಎಂ.ಜಿ.ದೊರೆಸ್ವಾಮಿ ಮೊದಲಾದವರಿದ್ದರು.

